ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ಜೂನ್ 15, 2015

**ಪತ್ರಿಕಾ ಪ್ರಕಟಣೆ**

# ಜೂನ್ 16 ರಂದು ಕುಂದಗೋಳದಲ್ಲಿ ಕೃಷಿ ಭಾಗ್ಯ ಯೋಜನೆ ಸಮರ್ಪಣೆ

**ಬೆಂಗಳೂರು, ಜೂನ್ 15 ( ಕರ್ನಾಟಕ ವಾರ್ತೆ ) :**

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಜೂನ್ 16 ರಂದು ಧಾರವಾಡ ಜಿಲ್ಲೆಯ ಕುಂದಗೋಳದಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ಸಮರ್ಪಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಕೃಷಿ ಅಭಿಯಾನ ಯೋಜನೆಗೂ ಚಾಲನೆ ನೀಡುವ ಅವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಹಾಗೂ ನವದೆಹಲಿಯ ಇಂಡಿಯನ್ ಸೊಸೈಟಿ ಆಫ್ ಅಗ್ರಿಬ್ಯುಸಿನೆಸ್ ಪ್ರೊಫೆಷನಲ್ಸ್‌ನ ಸಹಯೋಗದೊಂದಿಗೆ ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರಿತ ಸೇವಾ ಕೇಂದ್ರ_ಕೃಷಿ ಯಂತ್ರಧಾರೆ ಯೋಜನೆಯನ್ನೂ ಲೋಕಾರ್ಪಣೆ ಮಾಡಲಿದ್ದಾರೆ.

ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಆಹಾರ, ನಾಗರೀಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ಶ್ರೀ ದಿನೇಶ್ ಗುಂಡೂ ರಾವ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಶ್ರೀ ಹೆಚ್. ಕೆ. ಪಾಟೀಲ್, ಕೃಷಿ ಸಚಿವ ಶ್ರೀ ಕೃಷ್ಣ ಭೈರೇಗೌಡ ಅವರೂ ಸೇರಿದಂತೆ ಹಲವು ಗಣ್ಯರು ಈ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

**********

ಡಿ ಪಿ ಎಂ

ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ಜೂನ್ 15, 2015

**ಪತ್ರಿಕಾ ಪ್ರಕಟಣೆ**

## ಜೂನ್ 19 ರಂದು ನಗರದಲ್ಲಿ ಕರ್ನಾಟಕದಲ್ಲಿ ಗಣಿಗಾರಿಕೆ ಉತ್ಪಾದನೆ ಹೆಚ್ಚಿಸುವಿಕೆ ಕುರಿತ ಸಮ್ಮೇಳನ

**ಬೆಂಗಳೂರು, ಜೂನ್ 15 ( ಕರ್ನಾಟಕ ವಾರ್ತೆ ) :**

ಕರ್ನಾಟಕದಲ್ಲಿ ಗಣಿಗಾರಿಕೆ ಉತ್ಪಾದನೆ ಹೆಚ್ಚಿಸುವಿಕೆ ಕುರಿತ ಒಂದು ದಿನದ ಸಮ್ಮೇಳನವು ಜೂನ್ 19 ರಂದು ನಗರದಲ್ಲಿ ನಡೆಯಲಿದೆ.

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ, ಅರಣ್ಯ, ಪರಿಸರ ಮತ್ತು ಜೀವಿ ಶಾಸ್ತ್ರ ಸಚಿವ ಶ್ರೀ ಬಿ. ರಮಾನಾಥ್ ರೈ, ಪಶು ಸಂಗೋಪನಾ ಮತ್ತು ಮುಜರಾಯಿ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಶ್ರೀ ಟಿ. ಬಿ. ಜಯಚಂದ್ರ, ಅಶ್ಸೋಹಾಮ್‌ನ ಮಾಜಿ ಅಧ್ಯಕ್ಷರೂ ಆದ ಜಿಂದಾಲ್ ಸ್ಟೀಲ್ಸ್‌ನ ಮಾಜಿ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಶ್ರೀ ಸಜ್ಜನ್ ಜಿಂದಾಲ್, ಗಣಿಗಾರಿಕಾ ಮಂತ್ರಾಲಯದ ಕಾರ್ಯದರ್ಶಿ ಶ್ರೀ ಅನೂಪ್ ಕೆ ಪೂಜಾರಿ ಅವರೂ ಒಳಗೊಂಡಂತೆ ಹಿರಿಯ ಅಧಿಕಾರಿಗಳು ಚಿಂತನ–ಮಂಥನದ ಈ ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ.

**********

ಡಿ ಪಿ ಎಂ

ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ಜೂನ್ 15, 2015

**ಪತ್ರಿಕಾ ಪ್ರಕಟಣೆ**

# ಜೂನ್ 19 ರಂದು ನಗರದಲ್ಲಿ ತ್ಯಾಜ್ಯ ನೀರು ನಿರ್ವಹಣೆಗೆ ಯುಕ್ತಿತಂತ್ರ ಕುರಿತ ಕಾರ್ಯಾಗಾರ

**ಬೆಂಗಳೂರು, ಜೂನ್ 15 ( ಕರ್ನಾಟಕ ವಾರ್ತೆ ) :**

ರಾಜ್ಯ ಸರ್ಕಾರದ ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತ ಹಾಗೂ ಕರ್ನಾಟಕ ಜ್ಞಾನ ಅಯೋಗದ ಸಂಯುಕ್ತ ಆಶ್ರಯದಲ್ಲಿ ಜೂನ್ 19 ರಂದು ನಗರದಲ್ಲಿ ತ್ಯಾಜ್ಯ ನೀರು ನಿರ್ವಹಣೆಗೆ ಯುಕ್ತಿ ತಂತ್ರಗಳು ಕುರಿತ ಒಂದು ದಿನದ ಕಾರ್ಯಾಗಾರ ನಡೆಯಲಿದೆ.

ಜವಾಹರಲಾಲ್ ನೆಹರೂ ನಗರೋತ್ಥಾನ ನವೀಕರಣದ ಅಭಿಯಾನದ ಸಮಗ್ರ ಸಾಮರ್ಥ್ಯ ನಿರ್ಮಾಣ ಯೋಜನೆಯಡಿ ಆಯೋಜಿಸಿರುವ ಈ ಕಾರ್ಯಾಗಾರದಲ್ಲಿ ನಗರಾಭಿವೃದ್ಧಿ ಸಚಿವ ಶ್ರೀ ವಿನಯ್ ಕುಮಾರ್ ಸೊರಕೆ, ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವ ಶ್ರೀ ಆರ್. ವಿ. ದೇಶಪಾಂಡೆ, ಕರ್ನಾಟಕ ಜ್ಞಾನ ಆಯೋಗದ ಅಧ್ಯಕ್ಷ ಡಾ ಕೆ. ಕಸ್ತೂರಿ ರಂಗನ್ ಅವರು ಪಾಲ್ಗೊಂಡು ಬೆಳಕು ಚೆಲ್ಲಲಿದ್ದಾರೆ.

**********

ಡಿ ಪಿ ಎಂ